# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1244 |
| ಸದಸ್ಯರ ಹೆಸರು | : | ಶ್ರೀ ಮೋಹನ್‌ಕುಮಾರ್ ಕೊಂಡಜ್ಜಿ |
| ಉತ್ತರಿಸುವ ದಿನಾಂಕ | : | 23/12/2021 |
| ಉತ್ತರಿಸುವ ಸಚಿವರು | : | ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರಗಳು |
|---|---|---|
| ಅ) | ಜಲ ಸಂಪನ್ಮೂಲ ಇಲಾಖೆಯಲ್ಲಿ ಹಾಗೂ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ನಿಗಮಗಳಲ್ಲಿ ದ್ವಿತೀಯ ದರ್ಜೆ ಸಹಾಯಕರ ಖಾಲಿ ಇರುವ ಹುದ್ದೆಗಳೆಷ್ಟು; (ವಿವರ ನೀಡುವುದು) | ಜಲ ಸಂಪನ್ಮೂಲ ಇಲಾಖೆ ಹಾಗೂ ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿರುವ ಎಲ್ಲಾ ನಿಗಮಗಳಲ್ಲಿ ಖಾಲಿ ಇರುವ ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳ ವಿವರ ಕೆಳಕಂಡತಿರುತ್ತದೆ.<br><br>1) ಜಲಸಂಪನ್ಮೂಲ ಇಲಾಖೆ: 72<br>2) ಕಾವೇರಿ ನೀರಾವರಿ ನಿಗಮ ನಿ. 126<br>3) ಕರ್ನಾಟಕ ನೀರಾವರಿ ನಿಗಮ ನಿ. 117<br>4) ಕೃಷ್ಣಾ ಭಾಗ್ಯ ಜಲ ನಿಗಮ ನಿ. 30<br>5) ವಿಶ್ವೇಶ್ವರಯ್ಯ ಜಲ ನಿಗಮ ನಿ. 80<br><br>**ಒಟ್ಟು ಹುದ್ದೆಗಳ ಸಂಖ್ಯೆ: 425** |
| ಆ) | ಅನುಕಂಪದ ಆಧಾರದ ಮೇಲೆ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ತುಂಬಲು ವಿಭಾಗೀಯ ಆಯುಕ್ತರು, ಬೆಂಗಳೂರು ಇವರಿಗೆ ಬೇಡಿಕೆ (Demand) ಸಲ್ಲಿಸಲಾಗಿದೆಯೇ; ಸಲ್ಲಿಸಲಾಗದಿದ್ದಲ್ಲಿ, ಸಲ್ಲಿಸದಿರಲು ಕಾರಣವೇನು;(ವಿವರ ನೀಡುವುದು) | ಕರ್ನಾಟಕ ನಾಗರೀಕ ಸೇವಾ (ಅನುಕಂಪದ ಆಧಾರದ ನೇಮಕಾತಿ) ನಿಯಮಗಳು 1966ರ ನಿಯಮ 4ರ ಉಪನಿಯಮ (5) ರನ್ವಯ ಅನುಕಂಪದ ಆಧಾರದ ಮೇಲೆ ನೇಮಕಾತಿಯನ್ನು ನೇರ ನೇಮಕಾತಿ ಕೋಟಾದಡಿ ಲಭ್ಯವಿರುವ ಹುದ್ದೆಗಳಿಗೆ ಎದುರಾಗಿ ಮಾಡಬೇಕಾಗಿರುತ್ತದೆ. ಅದೇ ನಿಯಮದ ಉಪನಿಯಮ 6 ರನ್ವಯ ದಿವಂಗತ ನೌಕರರು ಸೇವೆ ಸಲ್ಲಿಸುತ್ತಿದ್ದ ಇಲಾಖೆಯಲ್ಲಿಯೇ ಅವರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಬೇಕಾಗಿರುತ್ತದೆ.<br><br>ಒಂದು ವೇಳೆ ಸಂಬಂಧಪಟ್ಟ ಇಲಾಖೆಯಲ್ಲಿ ಖಾಲಿ ಹುದ್ದೆಗಳು ಲಭ್ಯವಿಲ್ಲದಿದ್ದಲ್ಲಿ, ಅನುಕಂಪದ ಆಧಾರದ ಮೇಲೆ ನೇಮಕಾತಿಗೆ ಬಾಕಿಯಿರುವ ಅರ್ಜಿಗಳನ್ನು ಪೂರಕ ದಾಖಲೆಗಳೊಂದಿಗೆ ಆಯಾ ಅಭ್ಯರ್ಥಿಯ ಪ್ರದೇಶದ ವ್ಯಾಪ್ತಿಗೆ ಬರುವ ಪ್ರಾದೇಶಿಕ ಆಯುಕ್ತರಿಗೆ ಕಳುಹಿಸಬೇಕಾಗಿರುತ್ತದೆ. |

| | | |
|---|---|---|
| | | ಹೀಗೆ ಸಂಬಂಧಿಸಿದ ಇಲಾಖಾ ಮುಖ್ಯಸ್ಥರಿಂದ ಸ್ವೀಕರಿಸಿದ ಪ್ರಸ್ತಾವನೆಗಳನ್ನು ಪ್ರಾದೇಶಿಕ ಆಯುಕ್ತರು ಪರಿಶೀಲಿಸಿ ಇವರ ವ್ಯಾಪ್ತಿಯಲ್ಲಿ ಬರುವ ವಿವಿಧ ಇಲಾಖೆಯಲ್ಲಿರುವ ಖಾಲಿ ಹುದ್ದೆಗಳಿಗೆ ಎದುರಾಗಿ ಅಭ್ಯರ್ಥಿಗಳನ್ನು ಹಂಚಿಕೆ ಮಾಡುವ ಅಧಿಕಾರವನ್ನು ಸರ್ಕಾರದ ಅ.ಜ್ಞಾ. ಸಂಖ್ಯೆ: ಸಿಆಸುಇ 36 ಸೇಆಸೇ 96, ದಿನಾಂಕ: 07.02.1997 ಹಾಗೂ ಸಂಖ್ಯೆ: ಸಿಆಸುಇ 48 ಸೇಅನೇ 2006, ದಿನಾಂಕ: 24.11.2006 ರಲ್ಲಿ ನೀಡಲಾಗಿದೆ.<br><br>ಆದುದರಿಂದ ಇಲಾಖೆಯಲ್ಲಿ ಖಾಲಿ ಹುದ್ದೆಗಳು ಲಭ್ಯವಿದ್ದಲ್ಲಿ ಇಲಾಖಾ ಮುಖ್ಯಸ್ಥರೇ ನೇಮಕಾತಿ ಮಾಡಿಕೊಳ್ಳಲು ಅಧಿಕಾರವಿರುವುದರಿಂದ ಪ್ರಾದೇಶಿಕ ಆಯುಕ್ತರಿಗೆ ಪ್ರಸ್ತಾವನೆಗಳನ್ನು ಕಳುಹಿಸುವ ಅಗತ್ಯವಿರುವುದಿಲ್ಲ. |
| ಇ) | ಸಲ್ಲಿಸದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಸಲ್ಲಿಸಲಾಗುವುದು?(ವಿವರ ನೀಡುವುದು) | ಉದ್ಭವಿಸುವುದಿಲ್ಲ |

ಸಂಖ್ಯೆ: ಜಸಂಇ 260 ಸೇಇಸಿ 2021

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು